# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೊಂದನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಶುಕ್ರವಾರ, ದಿನಾಂಕ:15ನೇ ಡಿಸೆಂಬರ್, 2023**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

## 01. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು**

01. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೇ ತಿದ್ದುಪಡಿ) ವಿಧೇಯಕ, 2023
02. ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ, 2023
03. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2023

## 02. ಅರ್ಜಿಯನ್ನೊಪ್ಪಿಸುವುದು

**ಶ್ರೀ ಎಸ್.ಎಲ್. ಭೋಜೇಗೌಡ** ಅವರು ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್. ಪುರಂ ಹೋಬಳಿ, ಚಿನ್ನಪ್ಪನಹಳ್ಳಿ ಗ್ರಾಮದ ಸರ್ವೆ ನಂ.1/1, 3/3, 22, 21/1, 21/2 ಮತ್ತು 21/3ರಲ್ಲಿರುವ ಕಾಲುದಾರಿಯ ಅತಿಕ್ರಮವನ್ನು ತೆರವುಗೊಳಿಸಲು ವಿಫಲರಾಗಿರುವ ಕುರಿತು ಅರ್ಜಿಯನ್ನೊಪ್ಪಿಸುವುದು.

## 03. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೇ ತಿದ್ದುಪಡಿ) ವಿಧೇಯಕ, 2023

    **ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

    ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

    ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ, 2023

**ಶ್ರೀ ಎಚ್.ಕೆ. ಪಾಟೀಲ್ (ಮಾನ್ಯ ಕಾನೂನು, ನ್ಯಾಯ ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರ್ನಾಟಕ ನ್ಯಾಯವಾದಿಗಳ ಮೇಲಿನ ಹಿಂಸಾಚಾರ ನಿಷೇಧ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2023

**ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಕುರಿತು ವಿಶೇಷ ಚರ್ಚೆ

**ಶ್ರೀಯುತರುಗಳಾದ ನಿರಾಣಿ ಹಣಮಂತ್ ರುದ್ರಪ್ಪ, ಕೆ.ಎ. ತಿಪ್ಪೇಸ್ವಾಮಿ, ಕೋಟ ಶ್ರೀನಿವಾಸ ಪೂಜಾರಿ, ಶರವಣ ಟಿ.ಎ, ಎನ್. ರವಿಕುಮಾರ್, ಪಿ.ಹೆಚ್. ಪೂಜಾರ್, ಅಡಗೂರ್ ಹೆಚ್. ವಿಶ್ವನಾಥ್ ಹಾಗೂ ಇತರರುಗಳು** ಉತ್ತರ ಕರ್ನಾಟಕದಲ್ಲಿರುವ ನದಿಗಳ ನೀರನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ನದಿಗಳ ಜೋಡಣೆ ಮುಖಾಂತರ ನೀರಾವರಿ ಯೋಜನೆಗಳನ್ನು ಜಾರಿಗೊಳಿಸುವುದು. ಉತ್ತರ ಕರ್ನಾಟಕದ ಕೃಷ್ಣ, ತುಂಗಾ-ಭದ್ರ, ಮಲಪ್ರಭ, ಘಟಪ್ರಭ, ಮಹದಾಯಿ ನದಿಗಳ ನೀರಾವರಿ ಯೋಜನೆಗಳ ಅನುಷ್ಠಾನ, ಶಿಕ್ಷಣ ಹಾಗೂ ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಕುರಿತು ಚರ್ಚೆ.

## 05. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಹೆಚ್.ಪಿ. ಸುಧಾಮ್ ದಾಸ್** ಅವರು ಪರಿಶಿಷ್ಟ ಜಾತಿಯೊಳಗಿನ ಒಳಮೀಸಲಾತಿ ಕುರಿತ ಬೇಡಿಕೆಯು ನಾನಾ ಕಾರಣಗಳಿಂದ ಅನಗತ್ಯ ಗೊಂದಲ ಹಾಗೂ ಅತ್ಯಂತ ವಿವಾದಾತ್ಮಕ ವಿಷಯವಾಗಿದ್ದು, ಒಳಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ಪ್ರಸಕ್ತ ಕಾನೂನಿನ ಅಡೆತಡೆಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦2. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ಜಿಲ್ಲೆಯಲ್ಲಿ ಕರಡಿ ಹಾಗೂ ಚಿರತೆಗಳ ಹಾವಳಿ ಹೆಚ್ಚಾಗುತ್ತಿರುವುದರಿಂದ ಕರಡಿ, ಚಿರತೆ ಧಾಮಗಳನ್ನು ಸ್ಥಾಪಿಸಿ ಪ್ರಾಣಿಗಳ ರಕ್ಷಣೆಗೆ ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

೦೩. **ಶ್ರೀ ಅ. ದೇವೇಗೌಡ** ಅವರು ರಾಜ್ಯದ ನಾಗರೀಕರ, ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಆಧಾರದ ಮೇಲೆ ಮೀಸಲಾತಿ ಸಮೀಕ್ಷೆ ನಡೆಸುವುದರ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಕರ್ನಾಟಕ ಗ್ರಾಮ ಸ್ವರಾಜ್ ಹಾಗೂ ಪಂಚಾಯತ್ ರಾಜ್ ಕಾಯಿದೆ 1993ರಂತೆ ತ್ರಿಸ್ತರ ಪಂಚಾಯತ್‌ಗಳಾದ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್‌ಗಳಿಗೆ ಕಾರ್ಯಕ್ರಮಗಳು, ಆಡಳಿತ ಮಾನವ ಸಂಪನ್ಮೂಲಗಳು ಮತ್ತು ಅನುದಾನಗಳನ್ನು ವರ್ಗಾವಣೆ ಮಾಡಿ ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಡಾ: ತೇಜಸ್ವಿನಿ ಗೌಡ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ, ಕೆ.ಎಸ್. ನವೀನ್, ಸೂರಜ್ ರೇವಣ್ಣ ಹಾಗೂ ಡಿ.ಎಸ್. ಅರುಣ್** ಅವರುಗಳು ಕರ್ನಾಟಕ ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಸುರಕ್ಷೆ ಅಪಾಯದಲ್ಲಿರುವುದರಿಂದ ಸರ್ವಾಂಗೀಣ ಭದ್ರತೆ ಮತ್ತು ರಕ್ಷಣೆ ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦3. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ದಿನಾಂಕ:01.04.2006ರ ನಂತರ ನೇಮಕಗೊಂಡ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಡಾ: ವೈ.ಎ. ನಾರಾಯಣಸ್ವಾಮಿ, ಎಸ್.ಎಲ್. ಭೋಜೇಗೌಡ, ಮಧು ಜಿ. ಮಾದೇಗೌಡ, ಶಶೀಲ್ ಜಿ. ನಮೋಶಿ, ಎಸ್.ವ್ಹಿ. ಸಂಕನೂರ ಹಾಗೂ ಬಿ.ಎಂ. ಫಾರೂಖ್** ಅವರುಗಳು ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ, ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ಪಡೆದ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ 10, 15, 20, 25 ವರ್ಷಗಳ ಕಾಲಮಿತಿ ಬಡ್ತಿಯನ್ನು ಮಂಜೂರು ಮಾಡದಿರುವ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಕುರಿತು ಚರ್ಚೆ

**ಶ್ರೀಯುತರುಗಳಾದ:-**

| | |
|---|---|
| **ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ಡಾ:ವೈ.ಎ. ನಾರಾಯಣಸ್ವಾಮಿ, ಕೆ.ಎ. ತಿಪ್ಪೇಸ್ವಾಮಿ, ಡಾ: ತಳವಾರ್ ಸಾಬಣ್ಣ, ರಘುನಾಥ್ ರಾವ್ ಮಲ್ಕಾಪೂರೆ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ** | ರಾಜ್ಯದಲ್ಲಿ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳು ಹಾಗೂ ಅಲೆಮಾರಿ ಜನಾಂಗದ ಕಲ್ಯಾಣ ಯೋಜನೆಗಳು ಸ್ಥಗಿತಗೊಂಡಿರುವ ಕುರಿತು |

## 08. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 63(511) | ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು |
| 8ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 113(965) | ಮಾನ್ಯ ಕೃಷಿ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೆಯ ಪಟ್ಟಿ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**